



ದಿನಾಂಕ: 30-10-24 ರಂದು ಸಭಾಪತಿಯವರ ಕಛೇರಿಯಲ್ಲಿ ಶಿಕ್ಷಣ ಸಚಿವರಾದ **ಶ್ರೀ ಮಧು ಬಂಗಾರಪ್ಪ ಅವರ ಜೊತೆ ಮಾನ್ಯ ಸಭಾಪತಿ ಶ್ರೀ ಬಸವರಾಜ ಎಸ್ ಹೊರಟ್ಟಿ** ಅವರು ಪ್ರಸ್ತುತ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸಿದರು. ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಕಲಿಕೆಯಲ್ಲಿ ಗುಣಮಟ್ಟದ ಹಾಗೂ ಉತ್ಕೃಷ್ಟ ಶಿಕ್ಷಣಕ್ಕೆ ಒತ್ತು ನೀಡುವಂತೆ ಸಲಹೆ ನೀಡಿದರು.

ಸಚಿವರಾದ ಮಧು ಬಂಗಾರಪ್ಪನವರು ಹೊರಟ್ಟಿ ಅವರು ನೀಡಿದ ಎಲ್ಲ ಸಲಹೆಗಳನ್ನು ಅತ್ಯಂತ ಸಮಾಧಾನದಿಂದ ಆಲಿಸಿ ತಮ್ಮ ಮಾರ್ಗದರ್ಶನದಲ್ಲಿಯೇ ಈ ಎಲ್ಲ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದರ ಜೊತೆಗೆ ಶೈಕ್ಷಣಿಕ ಕ್ಷೇತ್ರದಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ **ಶ್ರೀ ರಿತೇಶಕುಮಾರ ಸಿಂಗ್, ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ. ಮಹೇಶ ವಾಳ್ವೇಕರ್** ಹಾಗೂ ಶಿಕ್ಷಣ ಇಲಾಖೆಯ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು.